# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆಗುರುತಿನ ಪ್ರಶ್ನೆ ಸಂಖ್ಯೆ : **1263**

ಸದಸ್ಯರ ಹೆಸರು : **ಶ್ರೀ ಗೋವಿಂದರಾಜು**

**(ವಿಧಾನಸಭೆಯಿಂದ ಚುನಾಯಿತರಾದವರು)**

ಉತ್ತರಿಸಬೇಕಾದ ಸಚಿವರು : ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು

ಉತ್ತರಿಸಬೇಕಾದ ದಿನಾಂಕ : **19-03-2025**

| | ಪ್ರಶ್ನೆ | ಉತ್ತರ |
|---|---|---|
| ಅ. | ಸಾಲಕ್ಕಾಗಿ ನಕಲಿ ದಾಖಲೆಗಳನ್ನು ಸಲ್ಲಿಸಿ, ಅಸ್ತಿತ್ವದಲ್ಲಿಲ್ಲದ ಬೋರ್ ವೆಲ್ ರಿಗ್ ಗಳನ್ನು ಹೊರ ರಾಜ್ಯ ಗಳಿಂದ ವರ್ಗಾಯಿಸುವ ಹೆಸರಿನಲ್ಲಿ ರಾಜ್ಯದ ಪ್ರಾದೇಶಿಕ ಸಾರಿಗೆ ಕಛೇರಿಗಳಲ್ಲಿ ಮರು ನೋಂದಣಿ ದಾಖಲಾತಿ ಸೃಷ್ಟಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? | ಈ ರೀತಿಯ ಯಾವುದೇ ಪ್ರಕರಣಗಳು ಇರುವುದಿಲ್ಲ. |
| ಆ. | ಹಾಗಿದ್ದಲ್ಲಿ ಇದುವರೆಗೂ ಎಷ್ಟು ಪ್ರಕರಣಗಳು ನಡೆದಿವೆ; ಹಾಗೂ ಈ ಬಗ್ಗೆ ಯಾವ ಯಾವ ಕ್ರಮ ತೆಗೆದು ಕೊಳ್ಳಲಾಗಿದೆ? | |
| ಇ. | ಮರು ನೋಂದಣಿಗೆ ಅರ್ಜಿ ಸಲ್ಲಿಸುವಾಗ ಭೌತಿಕವಾಗಿ ವಾಹನ ಹಾಜರಿರಬೇಕೆಂಬ ನಿಯಮ ಇದೆಯೇ ಯಾವ ಯಾವ ನೀತಿ ನಿಯಮಗಳಿವೆ; | ಹೌದು. ಕರ್ನಾಟಕ ಮೋಟಾರು ವಾಹನಗಳ ನಿಯಮಗಳು 1989ರ ನಿಯಮ 46(2)ರ ಪ್ರಕಾರ, ಮರು ನೋಂದಣಿಗೆ ವಾಹನವನ್ನು ಸಂಬಂಧಿಸಿದ ನೋಂದಣಿ ಪ್ರಾಧಿಕಾರದ ಮುಂದೆ ಭೌತಿಕವಾಗಿ ಹಾಜರುಪಡಿಸಬೇಕಾಗಿರುತ್ತದೆ.<br><br>ವಾಹನ ಮರು ನೋಂದಣಿ ಕುರಿತು ಕೆಳಕಂಡಂತೆ ನಿಯಮಗಳನ್ನು ರೂಪಿಸಲಾಗಿದೆ.<br><br>ಮೋಟಾರು ವಾಹನ ಕಾಯ್ದೆ 1988ರ ಕಲಂ 47(1) ಪ್ರಕಾರ, ಒಂದು ರಾಜ್ಯದಲ್ಲಿ ನೋಂದಾಯಿತ ಮೋಟಾರು ವಾಹನವನ್ನು ಹನ್ನೆರಡು ತಿಂಗಳುಗಳಿಗಿಂತ ಹೆಚ್ಚಿನ ಅವಧಿಗೆ ಮತ್ತೊಂದು ರಾಜ್ಯದಲ್ಲಿ ಕಾರ್ಯಾಚರಣೆ ಮಾಡಿದಲ್ಲಿ, ಅಂತಹ ವಾಹನದ ಮಾಲೀಕರು, ಕೇಂದ್ರ ಮೋಟಾರು ವಾಹನಗಳ ನಿಯಮಗಳು |

| | ಪ್ರಶ್ನೆ | ಉತ್ತರ |
|---|---|---|
| | | 1989ರ ನಿಯಮ 54ರ ಪ್ರಕಾರ ಮೂಲ ನೋಂದಣಿ ಪ್ರಾಧಿಕಾರದಿಂದ ನಮೂನೆ-28 ರಲ್ಲಿ ನಿರಾಕ್ಷೇಪಣಾ ಪತ್ರ (ಎನ್.ಒ.ಸಿ.) ಪಡೆದು, 30 ದಿನಗಳ ಒಳಗಾಗಿ ಹಾಗೂ ಕೇಂದ್ರ ಮೋಟಾರು ವಾಹನ ನಿಯಮಗಳು 1989ರ ನಿಯಮ 81ರಡಿ ನಿಗದಿತ ಶುಲ್ಕ ಹಾಗೂ ಕರ್ನಾಟಕ ಮೋಟಾರು ವಾಹನ ತೆರಿಗೆ ಕಾಯ್ದೆ 1957ರ ತೆರಿಗೆ ಷೆಡ್ಯೂಲ್ ನಲ್ಲಿ ನಿಗದಿಪಡಿಸಿದ ತೆರಿಗೆ ಪಾವತಿಸಿ ಮರು ನೋಂದಣಿ ಸಂಖ್ಯೆ ಪಡೆಯುವ ಸಲುವಾಗಿ ಅರ್ಜಿ ನಮೂನೆ-ಕೆ.ಎಂ.ವಿ.-27 ಮತ್ತು ಸಿ.ಎಂ.ವಿ.27ನ್ನು ಸಂಬಂಧಿಸಿದ ನೋಂದಣಿ ಪ್ರಾಧಿಕಾರಕ್ಕೆ ಸಲ್ಲಿಸಬೇಕು. |
| ಈ. | ಬೋರ್ ವೆಲ್ ರಿಗ್‌ಗಳಿಗೆ ಬ್ಯಾಂಕ್‌ಗಳಲ್ಲಿ 1 ಕೋಟಿ ರೂ.ವರೆಗೆ ಸಾಲ ನೀಡುತ್ತಿದ್ದು, ಇದನ್ನೆ ಬಂಡವಾಳ ಮಾಡಿಕೊಂಡು ಅರುಣಾಚಲ ಪ್ರದೇಶ, ಮಣಿಪುರ, ನಾಗಾಲ್ಯಾಂಡ್ ಸೇರಿ ಇನ್ನಿತರ ರಾಜ್ಯಗಳಿಂದ ಮರು ನೋಂದಣಿ ಮತ್ತು ವಿಳಾಸ ಬದಲಾವಣೆ ಹೆಸರಲ್ಲಿ ರಾಜ್ಯದ ಆರ್.ಟಿ.ಒ ಗಳಿಗೆ ಕಳುಹಿಸಿ ದಾಖಲಾತಿಗಳನ್ನು ಸೃಷ್ಟಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿಲ್ಲವೆ; | ಈ ರೀತಿಯ ಪ್ರಕರಣಗಳು ಯಾವುದೂ ಇರುವುದಿಲ್ಲ. |
| ಉ. | ಈ ಪ್ರಕರಣದಡಿಯಲ್ಲಿ ಇದುವರೆಗೂ ಎಷ್ಟು ಅಧಿಕಾರಿಗಳ ಮೇಲೆ ಕ್ರಮ ತೆಗೆದುಕೊಳ್ಳಲಾಗಿದೆ? (ಸಂಪೂರ್ಣ ವಿವರ ನೀಡುವುದು) | |

**ಟಿಡಿ 26 ಟಿಡಿಕ್ಯೂ 2025**

**(ರಾಮಲಿಂಗಾರೆಡ್ಡಿ)**
ಸಾರಿಗೆ ಮತ್ತು ಮುಜರಾಯಿ ಸಚಿವರು.